ಹೊರಡಿಸಿರುವ ಮಾರ್ಗಸೂಚಿಗಳ ಪ್ರಕಾರ ಉತ್ಪಾದನಾ ವಸ್ತುಗಳನ್ನು ಖರೀದಿಸಲು ಸೂಚನೆಗಳನ್ನು ನೀಡಲಾಗಿರುತ್ತದೆ.

ಅಸಂಘಟಿತ ಕಾರ್ಮಿಕರು

62(342) ಶ್ರೀ ಖಾದರ್ ಯು.ಟಿ. (ಮಂಗಳೂರು) ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಅಸಂಘಟಿತ ಕಾರ್ಮಿಕರಿಗೆ ವಿಮಾ ಯೋಜನೆಗಳನ್ನು ಜಾರಿಗೊಳಿಸಲಾಗಿದೆಯೇ; ಹಾಗಿದ್ದಲ್ಲಿ, ವಿಮಾ ಯೋಜನೆಗಳು ಯಾವುವು; (ವಿವರ ನೀಡುವುದು);

ಆ) ದಕ್ಷಿಣ ಕನ್ನಡ ಜಿಲ್ಲೆಯ ಎಷ್ಟು ಕಾರ್ಮಿಕರು ವಿಮಾ ಸೌಲಭ್ಯ ಪಡೆಯುತ್ತಿದ್ದಾರೆ; (ಕ್ಷೇತ್ರವಾರು ವಿವರ ನೀಡುವುದು)?

ಶ್ರೀ ಬಿ.ಎನ್. ಬಚ್ಚೇಗೌಡ (ಕಾರ್ಮಿಕ ಸಚಿವರು)

ಅ) ಯಾವುದೇ ವಿಮಾ ಯೋಜನೆಗಳನ್ನು ಜಾರಿಗೊಳಿಸಿಲ್ಲ.

ಆ) ಉದ್ಭವಿಸುವುದಿಲ್ಲ.

ಕಂದಾಯ ಭೂಮಿಯ ಸರ್ವೆ

63(61) ಶ್ರೀ ಕುಲಕರ್ಣಿ ಶ್ರೀಕಾಂತ್ ಸುಬ್ಬಾರಾವ್ (ಜಮಖಂಡಿ) ಮಾನ್ಯ ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೃಷ್ಣಾ ನದಿಯಿಂದ ಚಿಕ್ಕಲಕಿ (ಎಕಲಮಟ್ಟಿ) ಏತ ನೀರಾವರಿ ಯೋಜನೆಯನ್ನು ಸರ್ಕಾರ ಮಂಜೂರು ಮಾಡಿರುವುದೇ;

ಆ) ಹಾಗಿದ್ದಲ್ಲಿ, ತಾಂತ್ರಿಕ ಒಪ್ಪಿಗೆ ಆಗಿದೆಯೇ; ಅದರ ಯೋಜನಾ ವೆಚ್ಚ ಎಷ್ಟು;

ಇ) ಈ ಯೋಜನೆಯಿಂದ ಎಷ್ಟು ಎಕರೆ ಬರ ಪೀಡಿತ ಪ್ರದೇಶಕ್ಕೆ ನೀರಾವರಿ ಸೌಲಭ್ಯ ದೊರಕುತ್ತದೆ;

ಈ) ಪ್ರಸಕ್ತ ಸಾಲಿನಲ್ಲಿ ಈ ಯೋಜನೆ ಕಾರ್ಯ ಪ್ರಾರಂಭವಾಗವುದೇ?

ಶ್ರೀ ಗೋವಿಂದ ಎಂ. ಕಾರಜೋಳ (ಮಾನ್ಯ ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರು)

ಅ) ಮಂಜೂರು ಮಾಡಿರುವುದಿಲ್ಲ.

ಆ) 2007--08ನೇ ಸಾಲಿನ ದರಪಟ್ಟಿ ಪ್ರಕಾರ ರೂ. 31.00 ಕೋಟಿ ಮೊತ್ತದ ಅಂದಾಜು ಪಟ್ಟಿಗೆ ಕೆಲವು ಷರತ್ತಿಗೊಳಪಟ್ಟು, ತಾಂತ್ರಿಕ ಮೌಲ್ಯ ನಿರ್ಣಯ ಸಮಿತಿಯು ಒಪ್ಪಿಗೆ ನೀಡಿರುತ್ತದೆ.

ಇ) ಸುಮಾರು 4942 ಎಕರೆ (2000 ಹೆಕ್ಟೇರ್) ಪ್ರದೇಶಕ್ಕೆ ನೀರಾವರಿ ಸೌಲಭ್ಯ ಒದಗಿಸಬಹುದಾಗಿದೆ.

ಈ) ಪ್ರಸಕ್ತ ಸಾಲಿನಲ್ಲಿ ಪ್ರಾರಂಭಿಸಲು ಸಾಧ್ಯವಾಗಲಾರದು.

ಬಿದರಿ--ಗುಣದಾಳ ರಸ್ತೆ

64(62) ಶ್ರೀ ಕುಲಕರ್ಣಿ ಶ್ರೀಕಾಂತ್ ಸುಬ್ಬಾರಾವ್ (ಜಮಖಂಡಿ) ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿದರಿ--ಗುಣದಾಳ ನಡುವಿನ ಸೇತುವೆ ಹಾಗೂ ಅಕಾಲ ಮಳೆಯಿಂದ ಕಿತ್ತು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಿನ್ನೀರಿನಿಂದ ಭಾದಿತವಾಗಿರುವ ಈ ರಸ್ತೆಗೆ ಸಣ್ಣ ಸೇತುವೆ ನಿರ್ಮಿಸುವ ಕಾರ್ಯ ಯಾವಾಗ ಪ್ರಾರಂಭಿಸಲಾಗುತ್ತದೆ?

ಶ್ರೀ ಬಸವರಾಜ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು)

ಅ) ಬಂದಿದೆ.

ಆ) ಈಗ ಕೃಷ್ಣಾ ನ್ಯಾಯಾಧೀಕರಣದ ತೀರ್ಮ ಬಂದಿದ್ದು, ಆಲಮಟ್ಟಿ ಅಣೆಕಟ್ಟನ್ನು ಎತ್ತರಿಸುವ ಹಿನ್ನೆಲೆಯಲ್ಲಿ, ಸದರಿ ಸೇತುವೆ ನಿರ್ಮಿಸುವುದನ್ನು ತಾಂತ್ರಿಕವಾಗಿ ಪರಿಶೀಲಿಸಿ, ಅಗತ್ಯವಿದ್ದಲ್ಲಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ನಿಗಮದಡಿ ಮುಂದಿನ ಕ್ರಮ ಜರುಗಿಸಲಾಗುವುದು.

ಕೃಷ್ಣಾನದಿಯ ನೀರನ್ನು ಹೆಚ್ಚುವರಿಯಾಗಿ ಉಪಯೋಗಿಸುವುದು

65(362) ಶ್ರೀ ಸಿದ್ದುಸವದಿ (ತೇರದಾಳ್) ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೃಷ್ಣಾ ನದಿಯ ಒಟ್ಟು ನೀರಿನ ಪ್ರಮಾಣವೆಷ್ಟು, ಸ್ಕೀಂ 'ಎ' ಮತ್ತು ಸ್ಕೀಂ 'ಬಿ' ಗಳಲ್ಲಿ ಆಯಾ ರಾಜ್ಯಕ್ಕೆ ಹಂಚಿಕೆಯಾದ ನೀರಿನ ಪ್ರಮಾಣ ವೆಷ್ಟು;